ಸಿ.ಡಬ್ಲೂ-3 / ಪಿ.ಡಬ್ಲೂ-2

**ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ನಂಜನಗೂಡು, ಮೈಸೂರು ಜಿಲ್ಲೆ .**

**ಸಿ.ಸಿ.ನಂ. 1197/2019**

| | | |
|---|---|---|
| ಸಾಕ್ಷಿದಾರರ ಹೆಸರು | : | ಗಣೇಶ |
| ತಂದೆಯ ಹೆಸರು | : | ಮಾದಶೆಟ್ಟಿ |
| ವಯಸ್ಸು | : | 37 ವರ್ಷ |
| ಉದ್ಯೋಗ | : | ಆಟೋ ಚಾಲಕ |
| ವಾಸಸ್ಥಳ | : | ಮಲ್ಕುಂಡಿ ಗ್ರಾಮ, ನಂಜನಗೂಡು ತಾ. |

**ಸಾಕ್ಷಿಯನ್ನು ದಿನಾಂಕಃ 16.07.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ಮಾನ್ಯ ಸ. ಸ. ಅ. ರವರಿಂದಃ**

ಚಾಸಾ-1 ಯಾರೆಂದು ನನಗೆ ಗೊತ್ತಿಲ್ಲ. ಆರೋಪಿಗಳು ನಮ್ಮ ಪಕ್ಕದ ಗ್ರಾಮದವರು. ನಾನು ಯಾವುದೇ ಗಲಾಟೆಯನ್ನು ನೋಡಿಲ್ಲ. ಯಾರು ಹಲ್ಲೆ ಮಾಡಿರುತ್ತಾರೆಂದು ನನಗೆ ಗೊತ್ತಿಲ್ಲ. ನಾನು ಪೊಲೀಸರಿಗೆ ಯಾವುದೇ ಹೇಳಿಕೆ ನೀಡಿರುವುದಿಲ್ಲ .

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಬೇಕೆಂದು ಮಾನ್ಯ ಸ.ಸ.ಅ ಕೋರಲಾಗಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ ಸ.ಸ.ಅ ರವರಿಂದಃ**

ದಿನಾಂಕ 25.04.2019 ರಂದು ಹುರಾ ಗ್ರಾಮದ ಎಲ್ಲೆಗೆ ಸೇರಿದ ಸರ್ವೆ ನಂ. 92/1 ರ ಜಮೀನಿನಲ್ಲಿ ನಾನು ಕೆಲಸ ಮಾಡುತ್ತಿರುವಾಗ ಸಂಜೆ 7.00 ಗಂಟೆ ಸಮಯದಲ್ಲಿ ಚಾಸಾ-1 ಮತ್ತು 2 ರವರು ಅವರ ಜಮೀನಿನಲ್ಲಿ ಕೆಲಸ ಮಾಡುತ್ತಿದ್ದಾಗ ಆರೋಪಿಗಳು ಚಾಸಾ-2 ರವರ ಜಮೀನಿಗೆ ಅತಿಕ್ರಮ ಪ್ರವೇಶ ಮಾಡಿ, ಬೋಳಿಮಗನೆ,

ಸೂಳೆಮಗನೆ ಎಂದು ಬೈದು, ಗಲಾಟೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಆಗ ಚಾಸಾ-1ರವರು ಏಕೆ ಗಲಾಟೆ ಮಾಡುತ್ತೀರಿ ಎಂದು ಕೇಳಿದ್ದಕ್ಕೆ ಆರೋಪಿಗಳು ಲೋಫರ್ ಮುಂಡೆ ನೀನು ಏನು ಕೇಳುವುದು ಎಂದು ಬೈದಿರುತ್ತಾರೆ ಎಂದರೆ ಸರಿಯಲ್ಲ. ಆಗ ಚಾಸಾ-2 ತನ್ನ ಮಗನನ್ನು ಕರೆದುಕೊಂಡು ಬರುತ್ತೇನೆಂದು ಮನೆ ಕಡೆ ಹೋಗುತ್ತಿರುವಾಗ 2 ನೇ ಆರೋಪಿ ಚಾಸಾ-1 ರವರಿಗೆ ಈ ಜಮೀನನ್ನು ಬಿಟ್ಟುಹೋಗು ಎಂದು ಕೈಯಿಂದ ಚಾಸಾ-1ರವರ ತಲೆಗೆ ಹೊಡೆದಿರುತ್ತಾರೆ ಎಂದರೆ ಸರಿಯಲ್ಲ. 1 ನೇ ಆರೋಪಿ ದೊಣ್ಣೆಯಿಂದ ಚಾಸಾ-1ರವರ ಎಡಗೈ ಮುಂಗೈಗೆ ಹೊಡೆದು ನೋವುಂಟು ಮಾಡಿರುತ್ತಾರೆ ಎಂದರೆ ಸರಿಯಲ್ಲ. ಸ್ಥಳದಲ್ಲಿದ್ದ 3 ನೇ ಆರೋಪಿ ಇವರನ್ನು ಬಿಡಬೇಡಿ ಎಂದು ಕುಮ್ಮಕ್ಕು ನೀಡುತ್ತಿದ್ದರು ಎಂದರೆ ಸರಿಯಲ್ಲ. ಅಷ್ಟರಲ್ಲಿ ನಾನು ಮತ್ತು ಚಾಸಾ-2 ಹೋಗಿ ಜಗಳ ಬಿಡಿಸಿ ಸಮಾಧಾನಪಡಿಸಿರುತ್ತೇವೆ ಎಂದರೆ ಸರಿಯಲ್ಲ. ನಂತರ 1 ಮತ್ತು 2 ನೇ ಆರೋಪಿಗಳು ನಿಮ್ಮನ್ನು ಬಿಡುವುದಿಲ್ಲ, ಕೊಲೆ ಮಾಡುತ್ತೇವೆಂದು ಜೀವಬೆದರಿಕೆ ಹಾಕಿ ದೊಣ್ಣೆಯನ್ನು ಸ್ಥಳದಲ್ಲಿಯೇ ಬಿಸಾಡಿ ಹೋಗಿರುತ್ತಾರೆ ಎಂದರೆ ಸರಿಯಲ್ಲ. ಬಿಸಾಡಿ ಹೋದ ದೊಣ್ಣೆಯನ್ನು ಚಾಸಾ-1 ತೆಗೆದಿಟ್ಟುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಂತರ ಸ್ಥಳಕ್ಕೆ ಬಂದ ಚಾಸಾ-5ರವರು ಚಾಸಾ-1ರವರನ್ನು ಆಸ್ಪತ್ರೆಗೆ ಕರೆದುಕೊಂಡು ಹೋಗಿರುತ್ತಾರೆಂದು ನನಗೆ ತಿಳಿದಿರುತ್ತದೆ ಎಂದರೆ ಸರಿಯಲ್ಲ. ಗಲಾಟೆ ಸಮಯದಲ್ಲಿ ಕಳೆದುಹೋಗಿದ್ದ ತಾಳಿ ಸಿಕ್ಕಿರುತ್ತದೆ ಎಂದು ನನಗೆ ಗೊತ್ತಾಗಿರುತ್ತದೆ ಎಂದರೆ ಸರಿಯಲ್ಲ. ಈಗ ನನಗೆ ಓದಿ ಹೇಳಿದಂತೆ ಪೊಲೀಸರಿಗೆ ಹೇಳಿಕೆ ನೀಡಿರುತ್ತೇನೆಂದರೆ ಸರಿಯಲ್ಲ. ಸಾಕ್ಷಿಯು ಸದರಿ ಹೇಳಿಕೆಯನ್ನು ಅಲ್ಲಗಳೆದಿದ್ದರಿಂದ ಕೆಂಪು ಶಾಹಿಯಿಂದ ಗುರುತಿಸಲಾದ ಸದರಿ ಹೇಳಿಕೆಯ ಭಾಗವನ್ನು ನಿ.ಪಿ-3 ಎಂದು ಗುರುತಿಸಲಾಯಿತು. ಆರೋಪಿಗಳು ಚಾಸಾ-1 ಮತ್ತು 2ರವರ ಜೊತೆ ಗಲಾಟೆ ಮಾಡಿ, ಅವಾಚ್ಯ ಶಬ್ದಗಳಿಂದ ಬೈದು, ಹಲ್ಲೆ

ಮಾಡಿ, ಜೀವಬೆದರಿಕೆ ಹಾಕಿದ್ದು, ನಂತರ ನಾನು ಗಲಾಟೆ ಬಿಡಿಸಿದ್ದರೂ ಕೂಡ ಆರೋಪಿಗಳಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲುಃ** ಆರೋಪಿಗಳ ಪರ ವಕೀಲರಿಂದಃ ಏನೂ ಇರುವುದಿಲ್ಲ.

**(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸಾ ಸ ಇ ಒ.,**

ಸಹಿ/-

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.,**
**ನಂಜನಗೂಡು.**